# ಎನ್‌ಇಪಿಯಲ್ಲಿ ಹಿಂದಿ ಹೇರಿಕೆ ಇಲ್ಲ: ಧರ್ಮೇಂದ್ರ ಪ್ರಧಾನ್

**ಮಂಗಳೂರು:** ''ರಾಷ್ಟ್ರೀಯ ಶಿಕ್ಷಣ ನೀತಿ ಮೂಲಕ ಶಿಕ್ಷಣ ಸಂಸ್ಥೆಗಳಲ್ಲಿ ಹಿಂದಿ ಹೇರಿಕೆಯ ಯಾವ ಉದ್ದೇಶವೂ ಇಲ್ಲ ಎಂದು ಶಿಕ್ಷಣ, ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದರು.

''ನಮಗೆ ಎಲ್ಲ ಭಾಷೆಗಳೂ ಮುಖ್ಯ. ಎಲ್ಲ ಭಾಷೆ ಗಳಂತೆ ಹಿಂದಿಯೂ ಒಂದಾಗಿದೆ. ಎಲ್ಲ ರಾಜ್ಯಗಳೂ ಆಯಾ ರಾಜ್ಯದ ಸ್ಥಳೀಯ ಹಾಗೂ ಮಾತೃ ಭಾಷೆಗೆ ಆದ್ಯತೆ ನೀಡಲಿವೆ. ಮಧ್ಯಪ್ರದೇಶವು ಹಿಂದಿಯಲ್ಲೇ ವೈದ್ಯಕೀಯ, ಕಾನೂನು, ತಾಂತ್ರಿಕ ಶಿಕ್ಷಣ ನೀಡಲಿದೆ. ಅದು ಅವರಿಗೆ ಬಿಟ್ಟ ವಿಷಯ. ಯಾವ ಭಾಷೆಯನ್ನೂ ಮೊಟಕುಗೊಳಿಸುವ ಪ್ರಶ್ನೆಯೇ ಇಲ್ಲ'', ಎಂದು ಸುದ್ದಿಗೋಷ್ಠಿಯಲ್ಲಿ ಶನಿವಾರ ತಿಳಿಸಿದರು.

''ದೇಶವು ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಯ ಮೂರನೇ ವರ್ಷದಲ್ಲಿ ಇದೆ. ಆರಂಭಿಕ ಎರಡು ವರ್ಷ ಸ್ವಲ್ಪ ಹಿನ್ನಡೆಯಾಗಿತ್ತು. ಪ್ರಾಥಮಿಕ ಶಾಲೆಯಿಂದ ಸಂಶೋಧನಾ ತರಗತಿ ತನಕ ಎಲ್ಲರೂ ಅದನ್ನು ಅನುಷ್ಠಾನಕ್ಕೆ ತಂದಿದ್ದಾರೆ. ಎನ್‌ಇಪಿ ಜಾರಿ ಬಗ್ಗೆ ತೃಪ್ತಿ ಇದೆ. ಎಲ್ಲ ರಾಜ್ಯಗಳೂ, ಶಿಕ್ಷಣ ಸಂಸ್ಥೆಗಳು ಇದನ್ನು ಸ್ವಾಗತಿಸಿವೆ'' ಎಂದರು.

''ಭಾರತೀಯ ಐಐಟಿ ಮತ್ತು ಐಐಐಟಿಗಳು ಶಿಕ್ಷಣ ಸಂಸ್ಥೆಗಳು ಮಾತ್ರವಲ್ಲ, ಜ್ಞಾನದ ದೇಗುಲಗಳು. ಇಂದು 10ರಷ್ಟು ದೇಶಗಳು ಐಐಟಿ ಸ್ಥಾಪನೆಗೆ ಮುಂದಾಗಿವೆ. ಕೇಂದ್ರ ಶಿಕ್ಷಣ ಸಚಿವಾಲಯದ ನೆರವಿನಿಂದ ಹೊರದೇಶಗಳಲ್ಲಿ ಐಐಟಿಗಳನ್ನು ಸ್ಥಾಪಿಸುವ ಯೋಜನೆ ಇದೆ'' ಎಂದರು.

''ಎನ್‌ಐಟಿಕೆ ಹಾಸ್ಟೆಲ್‌ಗಳ ಆಹಾರದ ತ್ಯಾಜ್ಯದಿಂದ ಬಯೋಗ್ಯಾಸ್ ಉತ್ಪಾದಿಸಿ, ಅದರಿಂದ ಹೈಡ್ರೋಜನ್ ಶಕ್ತಿ ಉತ್ಪಾದನೆ ಮಾಡುತ್ತಿರುವುದು ಹೆಮ್ಮೆ ವಿಚಾರ. ಹೈಡ್ರೋಜನ್ ಶಕ್ತಿ ಭವಿಷ್ಯದ ಇಂಧನ ಮಾರುಕಟ್ಟೆಯಾಗಲಿದೆ. ವಿದ್ಯಾರ್ಥಿಗಳನ್ನು ಪ್ರಾಯೋಗಿಕ ಸಂಶೋಧನೆಯಲ್ಲಿ ತೊಡಗಿಸಿಕೊಂಡಿರುವುದು ಮಹತ್ಸಾಧನೆ'' ಎಂದು ಅವರು ಬಣ್ಣಿಸಿದರು.

''ಎನ್‌ಐಟಿಕೆಯು ಶಿಕ್ಷಣ, ಸಂಶೋಧನೆ ಜತೆಗೆ ಎಲೆಕ್ಟ್ರಿಕ್ ಚಾರ್ಜಿಂಗ್ ಸೌಲಭ್ಯ, ಸೋಲಾರ್ ಪ್ಯಾನಲ್, ಎಲೆಕ್ಟ್ರಿಕ್ ಸ್ಕೂಟರ್ ಮೊದಲಾದ ನವೀಕರಿಸಬಹುದಾದ ಇಂಧನ ಬಳಕೆ ಮಾಡಿ, ಸುಸ್ಥಿರ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತಿದೆ'', ಎಂದರು.

Vijaya Karnataka, Date: 16/10/22. p, no - 02